10

31 + 85

10

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಸ್. ಭೋಜೇಗೌಡ ಇವರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನೆಯ ಕುರಿತು**

**ವಿಷಯ:**

ಇತ್ತೀಚೆಗೆ ಹಲವು ವಿಶ್ವವಿದ್ಯಾಲಯಗಳನ್ನು ಮುಚ್ಚುವ ತೀರ್ಮಾನವನ್ನು ಸರ್ಕಾರ ಕೈಗೊಂಡಿರುವುದು ಸರಿಯಷ್ಟೇ. ಆದರೆ ಹಲವು ವಿಶ್ವವಿದ್ಯಾಲಯಗಳನ್ನು ಗಮನಿಸಿದಾಗ, ಅಲ್ಲಿ ಮೂಲ ಸೌಲಭ್ಯದ ಕೊರತೆ ಮತ್ತು ಪ್ರಾಥಮಿಕ ವ್ಯವಸ್ಥೆಯ ಕೊರತೆ ಎದ್ದು ಕಾಣುತ್ತಿರುವುದು ದುರಂತದ ಸಂಗತಿ. ಈ ರೀತಿ ಹಲವು ಸಮಸ್ಯೆಗಳಿರುವಾಗ, ಎಲ್ಲಿಂದ ವಿದ್ಯಾರ್ಥಿಗಳು ಬಂದು ಸದರಿ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಾರೆ. ವಿಶೇಷವಾಗಿ ಕೊಡಗು ವಿಶ್ವವಿದ್ಯಾಲಯದಲ್ಲಿ ಈ ರೀತಿಯ ಸಮಸ್ಯೆಯು ಹಲವು ದಿನಗಳಿಂದ ಇದೆ. ಇದನ್ನು ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕಾಗಿತ್ತು ಮತ್ತು ಸದರಿ ವಿಶ್ವವಿದ್ಯಾಲಯಗಳನ್ನು ಸುಧಾರಿಸುವ ನಿಟ್ಟಿನಲ್ಲಿ ಸರ್ಕಾರವು ಸೂಕ್ತ ಕ್ರಮ ತೆಗೆದುಕೊಳ್ಳಬಹುದಾಗಿತ್ತು. ಆದರೆ ಇದೆಲ್ಲವನ್ನು ಬಿಟ್ಟು, ಕೊಡಗು ವಿಶ್ವವಿದ್ಯಾಲಯವನ್ನು ಮುಚ್ಚಲು ಒಮ್ಮೆಲೆ ತೀರ್ಮಾನಿಸಿರುವುದು ನಿಜಕ್ಕೂ ಸರ್ಕಾರದ ಆತುರದ ನಿರ್ಧಾರವಾಗಿದೆ ಮತ್ತು ಹಲವು ಜನರ ಹೊಟ್ಟೆ ಪಾಡಿಗೆ ಕನ್ನ ಹಾಕಿದ ಹಾಗಿದೆ. ಸರ್ಕಾರವು ಹಲವು ಜನರಿಗೆ ಉದ್ಯೋಗ ಒದಗಿಸುವ ನಿಟ್ಟಿನಲ್ಲಿ ಮುಂಜಾಗ್ರತೆ ವಹಿಸುವುದು ಪ್ರಾಮುಖ್ಯವಾಗಿರುತ್ತದೆ. ಆದರೆ ಈಗಾಗಲೇ ನಿರುದ್ಯೋಗ ಸಮಸ್ಯೆ ತಾಂಡವವಾಡುತ್ತಿರುವ ಸಮಯದಲ್ಲಿ ಇನ್ನೂ ಹೆಚ್ಚಿನ ಸಮಸ್ಯೆಯನ್ನು ಹಲವು ಜನರಿಗೆ ತಂದೊಡ್ಡುತ್ತಿರುವುದು ಯಾವ ರೀತಿಯ ನ್ಯಾಯ ಎಂದು ತಿಳಿದು ಬರುತ್ತಿಲ್ಲ. ಆದ್ದರಿಂದ ಈ ಸಂಬಂಧ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.. .

**ಉತ್ತರ:**

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ರಾಜ್ಯದ ಯಾವುದೇ ಸಾರ್ವಜನಿಕ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಸರ್ಕಾರವು ತೀರ್ಮಾನಿಸಿರುವುದಿಲ್ಲ.

********

ಸಂಖ್ಯೆ: ಇಡಿ 98 ಯುಎನ್ಇ 2025

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು

Dr. M.C. SUDHAKAR M.O.S.,
Minister for Higher Education

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕುಶಾಲಪ್ಪ ಎಂ.ಪಿ.(ಸುಜಾ), ಎಸ್ ಎಲ್ ಭೋಜೇಗೌಡ, ಶಶೀಲ್ ಜಿ ನಮೋಶಿ, ಎಸ್.ವಿ.ಸಂಕನೂರು, ಡಿ.ಎಸ್. ಅರುಣ್ ಮತ್ತು ಡಾ:ಧನಂಜಯ ಸರ್ಜಿ ಇವರುಗಳು ನಿಯಮ-72ರಡಿ ಗಮನ ಸೆಳೆಯುವ ಸೂಚನೆ ಗೆ ಸರ್ಕಾರದ ಉತ್ತರ.**

## ಪ್ರಶ್ನೆ

ಈ ಹಿಂದಿನ ಸರ್ಕಾರದ ಅವಧಿಯಲ್ಲಿ ರಾಜ್ಯದಲ್ಲಿ ರಚನೆಗೊಂಡ ವಿಶ್ವ ವಿದ್ಯಾಲಯಗಳ ಪೈಕಿ ಕೊಡಗು ಜಿಲ್ಲೆಯಲ್ಲಿಯೂ ಕೂಡ ವಿಶ್ವ ವಿದ್ಯಾಲಯ ರಚನೆಗೊಂಡು ಕಾರ್ಯಾರಂಭಗೊಂಡಿತ್ತು. ಆದರೆ ಕಳೆದ 2 ವರ್ಷಗಳಿಂದ ಅಭಿವೃದ್ಧಿಗೆ ಇದುವರೆಗೂ ಯಾವುದೇ ಅನುದಾನ ಈ ವಿಶ್ವವಿದ್ಯಾಲಯಕ್ಕೆ ನೀಡದ ಸರ್ಕಾರ ಇದರ ಅವನತಿಗೆ ಕಾರಣವಾಗುತ್ತಿದೆ. ಜಿಲ್ಲಾ ಕೇಂದ್ರ ಮಡಿಕೇರಿಯ ಎಡಕ್ಕೆ ಮಂಗಳೂರು ವಿವಿ ಹಾಗೂ ಬಲಕ್ಕೆ ಮೈಸೂರು ವಿವಿಗಳನ್ನು ಹೊಂದಿದ್ದರೂ ಕೂಡ ಕೊಡಗು ಜಿಲ್ಲೆಯಲ್ಲಿ ಉನ್ನತ ಶಿಕ್ಷಣ ಪಡೆಯುವವರ ಸಂಖ್ಯೆ ಶೇ.15 ಮಾತ್ರವಾಗಿತ್ತು. ಅಂದರೆ ಪದವಿ ಹಾಗೂ ಉನ್ನತ ಶಿಕ್ಷಣ ಪಡೆಯುವ ಹಂಬಲವುಳ್ಳ ಹೆಣ್ಣುಮಕ್ಕಳನ್ನು ಸುರಕ್ಷತೆಯ ದೃಷ್ಟಿಯಿಂದ ದೂರದ ನಗರಗಳಿಗೆ ಕಳಿಸಲು ಪೋಷಕರು ಹಿಂದೇಟು ಹಾಕುತ್ತಿರುವುದು, ಹಾಗೆಯೇ ಇತರ ಬಡ ವಿದ್ಯಾರ್ಥಿಗಳು, ಪ. ಜಾತಿ ಪಂಗಡಗಳ, ಶೈಕ್ಷಣಿಕ ಸಮಸ್ಯೆಗಳನ್ನು ಮನಗಂಡು ಜಿಲ್ಲೆಗೊಂದು ವಿವಿ ಪರಿಕಲ್ಪನೆಯಂತೆ ಕೊಡಗು ಜಿಲ್ಲೆಯಲ್ಲಿ ಸ್ಥಾಪಿಸಲಾದ ವಿವಿಯ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಮತ್ತು ಸುಗಮವಾಗಿ ನಡೆಸಲು ಸೂಕ್ತ ಅನುದಾನವನ್ನು ಒದಗಿಸುವಂತೆ ಮತ್ತು ಸದರಿ ವಿವಿಯನ್ನು ಮುಚ್ಚುವ ನಿರ್ಧಾರವನ್ನು ಕೈಬಿಡುವಂತೆ ಆಗ್ರಹಿಸುವ ಕುರಿತು.

## ಉತ್ತರ

2022-23ನೇ ಆರ್ಥಿಕ ಸಾಲಿನ ಆಯವ್ಯಯದ ಭಾಷಣದ ಕಂಡಿಕೆ-103ರಲ್ಲಿನ ಘೋಷಣೆಯಂತೆ ಕಾಲೇಜುಗಳ ಮೇಲ್ವಿಚಾರಣೆಯನ್ನು ಸುಧಾರಿಸಲು ರಾಜ್ಯದ ಶೈಕ್ಷಣಿಕವಾಗಿ ಹಿಂದುಳಿದ ಪ್ರದೇಶಗಳಲ್ಲಿ ವಿನೂತನ ಮಾದರಿಯ 07 ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

1. ಈ ವಿಶ್ವವಿದ್ಯಾಲಯಗಳ ಸ್ಥಾಪನೆಗಾಗಿ ಯಾವುದೇ ಜಮೀನನ್ನಾಗಲೀ ವಾಹನವನ್ನಾಗಲೀ ಖರೀಸುವಂತಿಲ್ಲ ಹಾಗೂ ಹೊಸ ಕಟ್ಟಡಗಳನ್ನು ನಿರ್ಮಿಸುವಂತಿಲ್ಲ.
2. ಈಗಾಗಲೇ ಮಾತೃ ವಿಶ್ವವಿದ್ಯಾಲಯಗಳಿಗೆ ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯ ಹುದ್ದೆಗಳನ್ನು ಬಳಸಿಕೊಂಡು ಸ್ಥಾಪಿಸುವುದು ಯಾವುದೇ ಹೊಸ ಹುದ್ದೆಗಳನ್ನು ಸೃಜಿಸುವಂತಿಲ್ಲ;
3. ಈ ಹಿಂದುಳಿದ ಜಿಲ್ಲೆಗಳಲ್ಲಿ ಸಂಪೂರ್ಣವಾಗಿ Digital ಹಾಗೂ Enterpreneurial (ಕೌಶಲ್ಯಾಧಾರಿತ) "Earn while you learn" ಮಾದರಿಯಂತೆ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಕ್ರಮವಹಿಸುವುದು;

ವಿನೂತನ ಮಾದರಿಯ ಕೊಡಗು ವಿಶ್ವವಿದ್ಯಾಲಯದ ವೇತನಗಳಿಗೆ ಹೊರತುಪಡಿಸಿ ಮೂಲಭೂತ ಸೌಕರ್ಯಗಳಿಗಾಗಿ ಅವಶ್ಯವಿರುವ ಯಾವುದೇ ಹೆಚ್ಚುವರಿ ಅನುದಾನ ಒದಗಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಇಡಿ 59 ಹೆಚ್‌ಪಿಯು 2025)

**(ಡಾ|| ಎಂ.ಸಿ.ಸುಧಾಕರ್)**
**ಉನ್ನತ ಶಿಕ್ಷಣ ಸಚಿವರು**